**<u>ಹಿರಿಯ ದಿವಾಣಿ ಮತ್ತು ಜೆ ಎಮ್ ಎಫ್ ಸಿ ನ್ಯಾಯಾಲಯ, ಕುಂದಗೋಳ</u>**

<u>ಸಿ.ಸಿ. ನಂ. **1379/2024** ಸಿ. ಡಬ್ಲ್ಯೂ : **4.** ಪಿ ಡಬ್ಲ್ಯೂ ಃ **6**</u>

ಸಾಕ್ಷಿಯ ಹೆಸರು ಃ ಮಂಜುನಾಥ ತಹಶೀಲ್ದಾರ

ತಂದೆಯ ಹೆಸರು ಃ ಹನಮಂತಪ್ಪ

ವಯಸ್ಸು ಃ 30 ವರ್ಷ

ಉದ್ಯೋಗ ಃ ಚಾಲಕ

ವಾಸಸ್ಥಳ ಃ ಕುಂದಗೋಳ.

ದಿನಾಂಕಃ 11/05/2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.

<u>ಮುಖ್ಯ ವಿಚಾರಣೆಃ ಸಸಅ ರವರಿಂದ</u>

1. ಈಗ ನೋಡುತ್ತಿರುವ ವಾಹನ ಜಪ್ತಿ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ. 6 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.6 ಬಿ ಎಂದು ಗುರುತಿಸಲಾಯಿತು. ನಿಪಿ. 6 ಕ್ಕೆ ನಾನು ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆಯ ಮೇರೆಗೆ ಸಹಿ ಹಾಕಿರುತ್ತೇನೆ. ನಿಪಿ. 6 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಜಪ್ತಿ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ಕೆ ಎಸ್ ಆರ್ ಟಿ ಸಿ ಬಸ್ಸ್ ಅಮಾನತು ಮಾಡಿಲ್ಲ. ಈಗ ನೋಡುತ್ತಿರುವ ಭಾವ ಚಿತ್ರದಲ್ಲಿ ನಾನು ಇದ್ದು , ಸದರಿ ಭಾವಗಳನ್ನು ಒಟ್ಟಾಗಿ ಚಿತ್ರವನ್ನು ನಿಪಿ. 7 ಎಂದು ಗುರುತಿಸಲಾಯಿತು. ಭಾವ ಚಿತ್ರದಲ್ಲಿ ಪೋಲೀಸರು ನಿಲ್ಲಲ್ಲು ಹೇಳಿದ ಕಾರಣ ನಿಪಿ. 7 ರಲ್ಲಿ ನಿಂತಿರುತ್ತೇನೆ.

( ಮಾನ್ಯ ಸಸಅ ರವರ ಕೋರಿಕೆಯಂತೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ನಡೆಸಲು ಅನುಮತಿ ಕೋರಿರುತ್ತಾರೆ. ಕಡತ ಪರಿಶೀಲಿಸಿ ಅನುಮತಿ ನೀಡಲಾಯಿತು).

<u>ಪಾಟೀ ಸವಾಲು ಮಾನ್ಯ ಸಸಅ ರವರಿಂದಃ</u>

2. ದಿಃ 28/05/2024 ರಂದು ಆರೋಪಿ ಹಾಜರು ಪಡಿಸಿದ ಕೆ ಎಸ್ ಆರ್ ಟಿ ಸಿ ಬಸ್ಸ ನಂಬರ ಕೆಎ-25-ಎಫ್-3391 ನ್ನು ಬೆಳಿಗ್ಗೆ 10-00 ಗಂಟೆಯಿಂದ 11-00 ಗಂಟೆಯವರೆಗೆ ಚಾಸಾ 5 ಹಾಗೂ ನನ್ನ ಸಮಕ್ಷಮ ಜಪ್ತಿ ಪಂಚನಾಮೆಯ ಮೂಲಕ ಕುಂದಗೋಳ ಪೋಲೀಸ್ ಠಾಣೆಯಲ್ಲಿ ಜಪ್ತಿ ಪಡಿಸಿಕೊಂಡು ಓದಿ ಹೇಳಿದ ನಂತರ ನಿಪಿ. 6 ಕ್ಕೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯ ಕಾಲಕ್ಕೆ ನಿಪಿ. 7 ರ ಭಾವ ಚಿತ್ರವನ್ನು

ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಎಲ್ಲ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **(ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ)**</u>

<u>ಮರು ವಿಚಾರಣೆಃ</u> ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದಂತೆ ನನ್ನ ಉಕ್ತಲೇಖನಕ್ಕೆ ಗಂಟೆಯವರೆಗೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ

Sd/-

ಹಿರಿಯ ದಿವಾಣಿ ನ್ಯಾಯಾಧೀಶರು,

ಕುಂದಗೋಳ.